ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

19

ಇಲಾಖೆ / ವಿಷಯ : DEPARTMENT / SUBJECT: ಬಿಬಿಎಂಪಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 1/4/2021

# ಬಿಬಿಎಂಪಿ ನೂತನ ಕಾಯ್ದೆ ಅನುಷ್ಠಾನ

**ಬೆಂಗಳೂರು:** ಬಿಬಿಎಂಪಿ ಅಧಿನಿಯಮ -2020ರ ಅನ್ವಯ ಬಿಬಿಎಂಪಿ ಆಯುಕ್ತರ ಹುದ್ದೆಯನ್ನು ಮುಖ್ಯ ಆಯುಕ್ತರ ಹುದ್ದೆಯನ್ನಾಗಿ ಮತ್ತು ಜಂಟಿ ಆಯುಕ್ತರ ಹುದ್ದೆಯನ್ನು ವಲಯ ಜಂಟಿ ಆಯುಕ್ತರ ಹುದ್ದೆಯನ್ನಾಗಿ ಬದಲಾಯಿಸಿ ಸರ್ಕಾರ ರಾಜ್ಯಪತ್ರದಲ್ಲಿ ಅಧಿಸೂಚನೆ ಹೊರಡಿಸಿದೆ.

ಈ ಮೂಲಕ ಹೊಸ ಕಾಯ್ದೆಯಲ್ಲಿರುವ ಅಂಶಗಳನ್ನು ಅನುಷ್ಠಾನ ಪ್ರಾರಂಭವಾದಂತಾಗಿದೆ. ಪರಿಷ್ಕೃತ ಆದೇಶ ಏ.1ರಿಂದ (ಇಂದಿನಿಂದಲೇ) ಜಾರಿಗೆ ಬರಲಿದೆ. ಈಗಾಗಲೇ ಪಾಲಿಕೆಯ ಎಂಟು ವಲಯಗಳಿಗೆ ವಿಶೇಷ ಆಯುಕ್ತರನ್ನೇ ವಲಯ ಆಯುಕ್ತರ ಹುದ್ದೆಗೆ ನಿಯೋಜಿಸಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಹಾಲಿ ಜಂಟಿ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ವಲಯ ಜಂಟಿ ಆಯುಕ್ತರ ಅಧೀನರಾಗಿ ಕಾರ್ಯನಿರ್ವಹಿಸಲಿದ್ದಾರೆ. ಆಯುಕ್ತರ ಅಧಿಕಾರ ಮತ್ತು ಜವಾಬ್ದಾರಿಯನ್ನು ಮುಖ್ಯ ಆಯುಕ್ತರಿಗೆ ನೀಡಲಾಗಿದ್ದು, ನಿರ್ಣಯ, ಸುತ್ತೋಲೆ ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಸರ್ಕಾರಕ್ಕೆ ವರದಿ ಮಾಡಲು ಸೂಚಿಸಲಾಗಿದೆ.

ಪಾಲಿಕೆ ವ್ಯಾಪ್ತಿಯಲ್ಲಿ ತೆಗೆದುಕೊಳ್ಳುವ ಕ್ರಮಗಳು ಪಾಲಿಕೆಯ ನೂತನ ಕಾಯ್ದೆಯ 375ರ ಅಡಿ ಹಾಗೂ ಪರವಾನಗಿ, ಪ್ರಮಾಣ ಪತ್ರ ಸೇರಿದಂತೆ ಎಲ್ಲ ಆದೇಶಗಳು ಹೊಸ ಕಾಯ್ದೆಯ 376 ಅಡಿಯಲ್ಲಿ ಮುಂದುವರಿಯಲಿದೆ ಎಂದು ಸರ್ಕಾರ ಉಲ್ಲೇಖಿಸಿದೆ.